# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ಇವರು ನಿಯಮ -330ರಡಿ ನೀಡಿರುವ ಸೂಚನೆಗೆ ಉತ್ತರ.

## ಸೂಚನೆ:-

ಕರ್ನಾಟಕ ರಾಜ್ಯ ಸರ್ಕಾರದ ಮೀನುಗಾರಿಕೆ ಇಲಾಖೆಯಲ್ಲಿ ಮೀನುಗಾರರಿಗೆ ವಸತಿ ಸೌಕರ್ಯ ಒದಗಿಸುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಮತ್ಸ್ಯಾಶ್ರಯ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಈ ಯೋಜನೆಯ ಅಡಿಯಲ್ಲಿ ಮನೆ ನಿರ್ಮಾಣಕ್ಕೆ ಸರ್ಕಾರದಿಂದ ಸಹಾಯಧನವನ್ನು ನೀಡಲಾಗುತ್ತಿದ್ದು, ಪ್ರತಿವರ್ಷ ಫಲಾನುಭವಿಗಳಿಗೆ ಈ ಯೋಜನೆಯ ಅಡಿಯಲ್ಲಿ ಮನೆಗಳನ್ನು ನೀಡಲಾಗುತ್ತಿದೆ. ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಆಯಾ ಕಾಲಕ್ಕೆ ಸಹಾಯಧನವನ್ನು ಹೆಚ್ಚು ಮಾಡಿದ್ದು, ತಾಲ್ಲೂಕುವಾರು ಫಲಾನುಭವಿಗಳ ಆಯ್ಕೆಗೆ ಆಯ್ಕೆ ಸಮಿತಿಯನ್ನು ರಚಿಸಿರುತ್ತದೆ. ಇಲಾಖೆಯ ಅಧಿಕಾರಿಗಳು ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ವಿಫಲವಾಗಿದ್ದು, ಇದರಿಂದ ಇಡೀ ರಾಜ್ಯದಲ್ಲಿ ಫಲಾನುಭವಿಗಳಿಗೆ ಅನುದಾನಗಳು ದೊರೆತಿರುವುದಿಲ್ಲ ಮತ್ತು ವಸತಿ ಯೋಜನೆ ಪೂರ್ಣ ಪ್ರಮಾಣದಲ್ಲಿ ಜಾರಿಯಾಗಿರುವುದಿಲ್ಲ. ಅನೇಕ ಭಾಗಗಳಲ್ಲಿ ಆಯ್ಕೆ ಸಮಿತಿಯ ಸಭೆಗಳನ್ನು ನಡೆಸಿರುವುದಿಲ್ಲ ಮತ್ತು ಫಲಾನುಭವಿಗಳ ಆಯ್ಕೆಗೆ ಸ್ಥಳೀಯ ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸಿರುವುದಿಲ್ಲ. ಅಧಿಕಾರಿಗಳ ವೈಫಲ್ಯದಿಂದ ಯೋಜನೆಯು ಫಲಾನುಭವಿಗಳಿಗೆ ದೊರೆಯುತ್ತಿಲ್ಲ. ಆದರೂ ರಾಜ್ಯ ಸರ್ಕಾರ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ವಸತಿ ಯೋಜನೆಗಳನ್ನು ಸಕಾಲದಲ್ಲಿ ದೊರೆಯುವಂತೆ ಮಾಡುತ್ತಿಲ್ಲ. ಆದುದರಿಂದ ವಸತಿ ಯೋಜನೆಯನ್ನು ಸಮರ್ಪಕವಾಗಿ ಫಲಾನುಭವಿಗಳಿಗೆ ದೊರಕಿಸಿಕೊಡುವ ಕುರಿತು.

## ಉತ್ತರ:-

ಮೀನುಗಾರಿಕೆ ಇಲಾಖೆಯ ಮತ್ಸ್ಯಾಶ್ರಯ ಯೋಜನೆಯನ್ನು 2006 ರಿಂದ ಅನುಷ್ಠಾನ ಗೊಳಿಸುತ್ತಿದ್ದು, ಈವರೆಗೆ ಒಟ್ಟು 40440 ಮನೆಗಳು ಮಂಜೂರಾಗಿದ್ದು, 24766 ಮನೆಗಳು ಪೂರ್ಣಗೊಂಡಿರುತ್ತವೆ. ಈ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ಆದೇಶ ಸಂಖ್ಯೆ: ಪಸಂಮೀ /112/ಮೀಇಯೋ/2007 ದಿನಾಂಕ: 31-07-2008 ರಲ್ಲಿ ಆಯ್ಕೆ ಸಮಿತಿ ರಚಿಸಲಾಗಿತ್ತು.

ಸದರಿ ಆಯ್ಕೆ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-275/ ಮೀಇಯೋ/2021, ದಿನಾಂಕ: 04-10-2021 ರಲ್ಲಿ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

| ಹಾಲಿ ಇರುವ ಆಯ್ಕೆ ಸಮಿತಿ | ತಿದ್ದುಪಡಿಗೊಳಿಸಲಾದ ಆಯ್ಕೆ ಸಮಿತಿ |
|---|---|
| **ಅಧ್ಯಕ್ಷರು**, ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು | **ಅಧ್ಯಕ್ಷರು**: ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು |
| **ಸದಸ್ಯರು**: ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ) | **ಸಹ ಅಧ್ಯಕ್ಷರು**: ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ) |
| **ಸದಸ್ಯ ಕಾರ್ಯದರ್ಶಿ**: ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2) | **ಸದಸ್ಯ ಕಾರ್ಯದರ್ಶಿ**: ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು |

ಮತ್ಸ್ಯಾಶ್ರಯ ಯೋಜನೆಯಡಿ ಫಲಾನುಭವಿಗಳನ್ನು ಕೆಳಕಂಡ ಮಾನದಂಡಗಳನ್ವಯ ಆಯ್ಕೆ ಮಾಡಲಾಗುತ್ತಿದೆ.

1) ಫಲಾನುಭವಿಯು ಹುಟ್ಟು/ ವೃತ್ತಿಯಲ್ಲಿ ಮೀನುಗಾರನಾಗಿರಬೇಕು. ಮೀನುಗಾರಿಕೆಗೆ ಪೂರಕವಾದ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಸಹ ಆಯ್ಕೆಮಾಡಬಹುದಾಗಿದೆ.

2) ಫಲಾನುಭವಿಯು ವಿವಾಹಿತನಾಗಿರಬೇಕು.

3) ಫಲಾನುಭವಿಯು ಸ್ವಂತ ನಿವೇಶನ ಹೊಂದಿರತಕ್ಕದ್ದು.

4) ಫಲಾನುಭವಿಯು ಸ್ಥಳೀಯ ಮೀನುಗಾರರ ಸಹಕಾರ ಸಂಘದ ಸದಸ್ಯನಾಗಿರಬೇಕು. ಇಲ್ಲದಿದ್ದಲ್ಲಿ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಸಂಬಂಧಿಸಿದ ಮೀನುಗಾರಿಕೆ ಸಹಾಯಕನಿರ್ದೇಶಕರುರವರು ದೃಢೀಕರಿಸಬೇಕು.

5) ಫಲಾನುಭವಿಯು ಸರ್ಕಾರದ ಇತರೆ ವಸತಿ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದು. ಈ ಬಗ್ಗೆಸಂಬಂಧಪಟ್ಟ ಗ್ರಾಮಪಂಚಾಯಿತಿ, ಮುನಿಸಿಪಾಲಿಟಿ, ನಗರಸಭೆ ಮುಂತಾದ ಸಂಸ್ಥೆಗಳಿಂದ ದೃಢೀಕರಣ ಹೊಂದಿರತಕ್ಕದ್ದು.

6) ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದವರಾಗಿರತಕ್ಕದ್ದು.

ಯೋಜನೆಯು ಪ್ರಾರಂಭವಾದಾಗ ರೂ. 40,000/- ಸಹಾಯಧನ ನೀಡಲಾಗುತಿತ್ತು. ತದನಂತರ ಈ ಮೊತ್ತವನ್ನು ರೂ. 60,000/-ಗಳಿಗೆ ಹೆಚ್ಚಿಸಲಾಗಿದ್ದು, ಪ್ರಸ್ತುತ ಸಾಮಾನ್ಯ ವರ್ಗದ ಫಲಾನುಭವಿಗೆ ರೂ. 1.20 ಲಕ್ಷ ಗ್ರಾಮಾಂತರ ಪ್ರದೇಶದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ರೂ. 1.75 ಲಕ್ಷ ಮತ್ತು ನಗರ ಪ್ರದೇಶದ ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ರೂ. 2.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

ಈ ಯೋಜನೆಯ ಅನುಷ್ಠಾನ ಸಂಸ್ಥೆಯಾಗಿ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮ ನಿ., ಮಂಗಳೂರು ಅನ್ನು ನೇಮಿಸಲಾಗಿದೆ. 2015-16ನೇ ಸಾಲಿನಿಂದ ನೇರ ನಗದು ವರ್ಗಾವಣೆ ಮೂಲಕ ಸಹಾಯಧನ ಬಿಡುಗಡೆಗೊಳಿಸಲಾಗುತ್ತಿದೆ. ಆಯ್ಕೆ ಸಮಿತಿಯು ಆಯ್ಕೆ ಮಾಡಿದ ಫಲಾನುಭವಿಗಳು ಅಗತ್ಯ ದಾಖಲಾತಿಗಳನ್ನು ಇಲಾಖೆಗೆ ಕ್ರೋಢಿಕರಿಸಿ ಸಲ್ಲಿಸಲು ವಿಳಂಬವಾಗುತ್ತಿದ್ದು ಹಾಗೂ ಫಲಾನುಭವಿಯು ಮನೆಯನ್ನು ನಿರ್ಮಿಸಿಕೊಂಡ ನಂತರ ಸಹಾಯಧನವನ್ನು ಪಾವತಿಸಬೇಕಾಗಿರುವ ಕಾರಣ ಯೋಜನೆಯ ಅನುಷ್ಠಾನ ಸ್ವಲ್ಪ ವಿಳಂಬವಾಗುತ್ತಿದೆ. ಆದಾಗ್ಯೂ ಯೋಜನೆಯನ್ನು ಈವರೆಗೆ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

ಆಯ್ಕೆ ಸಮಿತಿಯ ಸಭೆಯನ್ನು ಕಡ್ಡಾಯವಾಗಿ ನಡೆಸಲು ಹಾಗೂ ಸರ್ಕಾರದ ತಿದ್ದುಪಡಿ ಸಂಖ್ಯೆ: ಪಸಂಮೀ/ಇ-275/ಮೀಇಯೋ/2021, ದಿನಾಂಕ: 04-10-2021 ರನ್ವಯ ಆಯ್ಕೆ ಸಮಿತಿ ಸಭೆಯನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಆಯೋಜಿಸಿ ನಿರ್ವಹಿಸಬೇಕಾಗಿರುತ್ತದೆ.

ಇದಕ್ಕೆ ತಪ್ಪಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಶಿಸ್ತು ಕ್ರಮವಹಿಸಲಾಗುವುದು. ಸದಸ್ಯ ಕಾರ್ಯದರ್ಶಿಗಳಾದ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಆಯ್ಕೆ ಸಮಿತಿ ಸಭೆ ನಡೆಸಿ ಫಲಾನುಭವಿಗಳ ಆಯ್ಕೆ ಮಾಡಿ ಮತ್ಸ್ಯಾಶ್ರಯ ಯೋಜನೆಯನ್ನು ಸಕಾಲದಲ್ಲಿ ಫಲಾನುಭವಿಗಳಿಗೆ ಒದಗಿಸಿ ಸಮರ್ಪಕವಾಗಿ ಮತ್ತು ತ್ವರಿತವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಿದೆ.

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಸಂಖ್ಯೆ: ಪಸಂಮೀ ಇ-93 ಮೀಇಯೋ 2026